# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ.145/2022-23

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 08.06.2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ. ಬಿ12(5)ಪಿ.ಆರ್/35/2020-21, ದಿನಾಂಕ. 21.09.2020ರ ಆದೇಶದಂತೆ ದಿ. 04.06.2022ರಂದು ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಸ್ಥಳ:** ಬಿಬಿಎಂಪಿ ಕಛೇರಿ, ಮಾಗಡಿ ರಸ್ತೆ, 4ನೇ ಕ್ರಾಸ್,

**ಸಮಯ:** ಬೆಳಿಗ್ಗೆ 11.30 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| | | |
|---|---|---|
| 1 | ಶ್ರೀ ರಾಜಣ್ಣ, | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 2 | ಶ್ರೀಮತಿ ಹೇಮಲತ ಜೆ. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, |
| 3 | ಶ್ರೀ ಗೋವಿಂದರಾಜ್ | ಕಿರಿಯ ಆರೋಗ್ಯ ಪರೀವೀಕ್ಷಕರು |
| 4 | ಶ್ರೀ ರಘು | ಸದಸ್ಯರು |
| 5 | ಶ್ರೀ ದೋಡ್ಡವೀರಪ್ಪ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6 | ಸಾರ್ವಜನಿಕರು | |

**ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳು ಮತ್ತು ಸಿಬ್ಬಂದಿಗಳೊಂದಿಗೆ ಈ ಕೆಳಕಂಡ ಅಂಶಗಳನ್ನು ಚರ್ಚಿಸಲಾಯಿತು.**

**ಹಿಂದಿನ ಸಭೆಯ ನಡವಳಿಗಳನ್ನು ಪರಿಶೀಲಿಸಲಾಯಿತು.**

1. ಮಾಗಡಿ ಮುಖ್ಯ ರಸ್ತೆಯ ಅಂಜನ್ ಥಿಯೇಟರ್ ಹತ್ತಿರ ರಸ್ತೆ ಗುಂಡಿ ಮುಚ್ಚುವಂತೆ ಶ್ರೀ ಪಾಂಡುರಂಗ ರವರು ಹಿಂದಿನ ಸಭೆಯಲ್ಲಿ ಕೋರಿರುತ್ತಾರೆ ಸದರಿಯವರ ಕೋರಿಕೆಯ ಮೇರೆಗೆ ರಸ್ತೆ ಗುಂಡಿಯನ್ನು ಮುಚ್ಚಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.
2. ಮಾಗಡಿ ಮುಖ್ಯರಸ್ತೆಯಲ್ಲಿರುವ ಪಾದಚಾರಿ ಮಾರ್ಗಗಳನ್ನು ಸರಿಪಡಿಸುವಂತೆ ಸಾರ್ವಜನಿಕರು ಕೋರಿರುತ್ತಾರೆ.
3. ವಾರ್ಡ್ ಸಂಖ್ಯೆ. 121ರ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯವನ್ನು ನಿರ್ಮಿಸಿಕೊಡುವಂತೆ ಸಾರ್ವಜನಿಕರು ಕೋರಿರುವುದರಿಂದ ಮುಂದಿನ ಕ್ರಿಯಾ ಯೋಜನೆಯಡಿಯಲ್ಲಿ ಸೇರಿಸಿ ಕ್ರಮ ಕೈಗೊಳ್ಳಲಾಗುವುದು.
4. ಗೋಪಾಲಪುರ ರಸ್ತೆ, ಶಂಕರಪ್ಪ ಗಾರ್ಡನ್ ರಸ್ತೆಗಳಲ್ಲಿ ಡೆಬ್ರೀಸ್ ತೆರವುಗೊಳಿಸಿರುವ ಬಗ್ಗೆ ಸಾರ್ವಜನಿಕರಿಗೆ ತಿಳಿಸಲಾಗಿದೆ.
5. ವಾರ್ಡ್ ವ್ಯಾಪ್ತಿಯ ಕೊಳವೆ ಬಾವಿಗಳನ್ನು ಸರಿಪಡಿಸುವಂತೆ ಸಾರ್ವಜನಿಕರು ಕೋರಿರುತ್ತಾರೆ.
6. ವಾರ್ಡ್ ವ್ಯಾಪ್ತಿಗಳಲ್ಲಿ ಬೀದಿ ದೀಪಗಳು ಬೆಳಿಗ್ಗೆ 6.00 ಗಂಟೆಯವರೆಗೆ ಆನ್‌ನಲ್ಲಿ ಇರಬೇಕೆಂದು ಸಾರ್ವಜನಿಕರು ಕೋರಿರುವ ಬಗ್ಗೆ ಕ್ರಮ ಕೈಗೊಳ್ಳಲಾಗಿರುತ್ತದೆ.

7. ಮಳೆಗಾಲ ಪ್ರಾರಂಭವಾಗುವ ಮುನ್ನ ಕೇಬಲ್‌ನ್ನು ತೆರವುಗೊಳಿಸುವ ಕಾರ್ಯಾಚರಣೆ ಮಾಡುವಂತೆ ಸಾರ್ವಜನಿಕರು ಕೋರಿರುತ್ತಾರೆ. ಸದರಿ ತೆರವು ಕಾರ್ಯಾಚರಣೆಯಲ್ಲಿ ಸಾರ್ವಜನಿಕರಿಗೆ ಹಾನಿಯಾಗದಂತೆ ತೆರವು ಕಾರ್ಯ ಮಾಡುವಂತೆ ಕೋರಿರುತ್ತಾರೆ.

ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

**ನಿರ್ಣಯ:-**

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತು.

Chaitra. K.

ಕಾರ್ಯದರ್ಶಿಗಳು
ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು
ವಾರ್ಡ್ ಸಂಖ್ಯೆ. 121, ಬಿನ್ನಿಪೇಟೆ

**ಪ್ರತಿಯನ್ನು:**

1.ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2.ಮಾನ್ಯ ವಿಶೇಷ ಆಯುಕ್ತರು, (ಆರೋಗ್ಯ ಮತ್ತು ಘ.ತ್ಯಾ.ನಿ) ರವರ ಅವಗಾಹನೆಗೆ ಸಲ್ಲಿಸಿದೆ.
3.ಮಾನ್ಯ ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4.ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
5.ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
6.ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
7.ವಾರ್ಡ್ ಸಮಿತಿ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8.ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
9.ವಾರ್ಡ್ ಸಮಿತಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.